# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

**ಪತ್ರಿಕಾ ಪ್ರಕಟಣೆ** ದಿನಾಂಕ: 02.08.2019

## "ಮೇಯರ್ ಕಪ್" ಬ್ಯಾಸ್ಕೆಟ್‌ಬಾಲ್ ಪಂದ್ಯಾವಳಿ ಕುರಿತು ಪೂಜ್ಯ ಮಹಾಪೌರರು ರವರಿಂದ ಮಾಧ್ಯಮಗೋಷ್ಠಿ:



"ಮೇಯರ್ ಕಪ್" ಬ್ಯಾಸ್ಕೆಟ್‌ಬಾಲ್ ರಾಜ್ಯಮಟ್ಟದ ಪಂದ್ಯಾವಳಿಯನ್ನು 07-08-2019 ರಿಂದ 11-08-2019 ರವರೆಗೆ ಆಯೋಜಿಸುತ್ತಿರುವ ಬಗ್ಗೆ ಶುಕ್ರವಾರ ಬಿಬಿಎಂಪಿ ಕೇಂದ್ರ ಕಚೇರಿ ಪೂಜ್ಯ ಮಹಾಪೌರರು ರವರ ಕೊಠಡಿಯಲ್ಲಿ ಮಾಧ್ಯಮಗೋಷ್ಠಿ ನಡೆಯಿತು. ಸದರಿ ಮಾಧ್ಯಮಗೋಷ್ಠಿಯಲ್ಲಿ ಮಾನ್ಯ ಆಡಳಿತ ಪಕ್ಷದ ನಾಯಕರು, ಆಡಳಿತ ಹಾಗೂ ಜೆಡಿಎಸ್ ಪಕ್ಷದ ನಾಯಕರುಗಳು, ಮಾನ್ಯ ಆಯುಕ್ತರು, ಬ್ಯಾಸ್ಕೆಟ್‌ಬಾಲ್ ಫೆಡರೇಶನ್ ಆಫ್ ಇಂಡಿಯಾ ಅಧ್ಯಕ್ಷರು ಹಾಗೂ ಇತರೆ ಅಧಿಕಾರಿಗಳು ಇದ್ದರು.

ಕ್ರೀಡೆಗಳನ್ನು ಪ್ರೋತ್ಸಾಹಿಸುವ ಹಾಗೂ ಕ್ರೀಡಾಪಟುಗಳನ್ನು ಉತ್ತೇಜಿಸುವ ಉದ್ದೇಶದಿಂದ ಬಿಬಿಎಂಪಿ ವತಿಯಿಂದ ಪ್ರತಿವರ್ಷವೂ "ಮೇಯರ್ ಕಪ್" ಆಯೋಜನೆ ಮಾಡಲಾಗುತ್ತಿದೆ ಎಂದು ಮಹಾಪೌರರು ತಿಳಿಸಿದರು.

ಮಾಧ್ಯಮಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಮಹಾಪೌರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಕರ್ನಾಟಕ ರಾಜ್ಯ ಬ್ಯಾಸ್ಕೆಟ್‌ಬಾಲ್ ಸಂಸ್ಥೆ ಸಹಭಾಗಿತ್ವದಲ್ಲಿ ಆಗಸ್ಟ್ 7 ರಿಂದ 11 ರವರೆಗೆ ಐದು ದಿನಗಳ ಕಾಲ ಜಯನಗರ ವಾರ್ಡ್(153) ಕೃಷ್ಣರಾವ್ ಪಾರ್ಕ್‌ನಲ್ಲಿ "ಮೇಯರ್ ಕಪ್" ಬ್ಯಾಸ್ಕೆಟ್‌ಬಾಲ್ ರಾಜ್ಯಮಟ್ಟದ ಪಂದ್ಯಾವಳಿಯನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ಬ್ಯಾಸ್ಕೆಟ್‌ಬಾಲ್ ಪಂದ್ಯಾವಳಿಯಲ್ಲಿ ಹಿರಿಯ ಪುರುಷ /ಮಹಿಳೆಯರ ಜೊತೆಗೆ ಕಿರಿಯ(13 ವರ್ಷ ವಯೋಮಿತಿಯೊಳಗಿನ) ಬಾಲಕ /ಬಾಲಕಿಯರ ಪಂದ್ಯಾವಳಿಗಳನ್ನು ಕೂಡಾ ಆಯೋಜಿಸಲಾಗಿದೆ. ಈ ಸಲ ಕಿರಿಯರಿಗೆ ಆದ್ಯತೆ ನೀಡಿರುವುದು ಸಂತಸದ ವಿಷಯವಾಗಿದೆ ಎಂದು ತಿಳಿಸಿದರು.

ಬ್ಯಾಸ್ಕೆಟ್‌ಬಾಲ್ ಪಂದ್ಯಾವಳಿಯಲ್ಲಿ ದೇಶದ ವಿವಿಧ ರಾಜ್ಯಗಳಿಂದ 64 ತಂಡಗಳು ಭಾಗವಹಿಸುತ್ತಿದ್ದು, ಹಿರಿಯ ಪುರುಷ /ಮಹಿಳೆ ಹಾಗೂ ಕಿರಿಯ ಬಾಲಕ / ಬಾಲಕಿಯರ ತಲಾ 16 ತಂಡಗಳು ಇರುತ್ತವೆ.

## ಸನ್ಮಾನ್ಯ ಮುಖ್ಯಮಂತ್ರಿಗಳು ರವರಿಂದ ಉದ್ಘಾಟನೆ:

ಜಯನಗರ ವಾರ್ಡ್ ಕೃಷ್ಣರಾವ್ ಉದ್ಯಾನದಲ್ಲಿ ನೂತನವಾಗಿ ನಿರ್ಮಾಣ ಮಾಡಲಾಗಿರುವ "ಶ್ರೀ ಶ್ರೀ ಶ್ರೀ ಡಾ|| ಶಿವಕುಮಾರ ಸ್ವಾಮೀಜಿಗಳ" ಒಳಾಂಗಣ ಬ್ಯಾಡ್ಮಿಂಟನ್ ಕ್ರೀಡಾಂಗಣವನ್ನು ಆಗಸ್ಟ್ 9 ರಂದು ಮಾನ್ಯ ಮುಖ್ಯಮಂತ್ರಿಗಳು ಉದ್ಘಾಟನೆಯ ಮಾಡಲಿದ್ದಾರೆ. ಈ ಸಂಬಂಧ ಆಗಸ್ಟ್ 9 ರಿಂದ ಆಗಸ್ಟ್ 11 ರವರೆಗೆ ಮೂರು ದಿನಗಳ ಕಾಲ ಕ್ರಿಯೇಟಿವ್ ಸ್ಪೋರ್ಟ್ಸ್ ಅಕಾಡೆಮಿ / ಪ್ರೀಮಿಯರ್ ಲೀಗ್ ಅಕಾಡೆಮಿಯ ಸಹಭಾಗಿತ್ವದಲ್ಲಿ "ಮೇಯರ್ ಕಪ್" ಬ್ಯಾಡ್ಮಿಂಟನ್ ಪಂದ್ಯಾವಳಿಯನ್ನು ಕೂಡಾ ಆಯೋಜಿಸಲಾಗುತ್ತಿದೆ. ಕ್ರೀಡೆಗಳಿಗೆ ಹೆಚ್ಚು ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಎಲ್ಲಾ ಸಾರ್ವಜನಿಕರು ಪಂದ್ಯಾವಳಿ ನಡೆಯುವ ವೇಳೆ ಉಪಸ್ಥಿತರಿದ್ದು, ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದರು.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**